# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 34, ಗಂಗೇನಹಳ್ಳಿ**

ಸಂಖ್ಯೆ: ಸ.ಅ/ವಾ-34/ಪಿ.ಆರ್/ 25/2021-22 ದಿನಾಂಕ:- 05-02-2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ವಿಷಯ: ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/ 2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 05-02-2022 ರಂದು ವಾರ್ಡ್ ನಂ:34, ಗಂಗೇನಹಳ್ಳಿ, ವಾರ್ಡ್ ಸಮಿತಿ ಸಭೆಯ ನಡವಳಿಗಳು.

## :: ಸಭೆಗೆ ಹಾಜರಾಗಿದ್ದವರ ವಿವರಗಳು ::

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ.ತಿಮ್ಮರಸ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ.ರಾಮರಾವ್ . | ಸದಸ್ಯ ಕಾರ್ಯದರ್ಶಿ ವಾಡ್ ನಂ: 34 |
| 3. | ಶ್ರೀ. ಜಿ.ಹೆಚ್.ಪುಟ್ಟರಾಜು | ಆರ್.ಟಿ ನಗರ ಟ್ರಾಫಿಕ್ ಪೋಲೀಸ್ |
| 4. | ಶ್ರೀ.ಕೆ.ಎಸ್.ರವೀಂದ್ರನಾಥ್ | ಅರಣ್ಯಾಧಿಕಾರಿಗಳು |
| 5. | ಶ್ರೀಮತಿ ಸುವರ್ಣದೇವಿ | ವರ್ಕ್ ಇನ್ಸ್‌ಪೆಕ್ಟರ್ ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 6. | ಶ್ರೀಮತಿ ಸೋಮೇಶ್ | ಬಿ.ಬಿ.ಎಂ.ಪಿ ಸೂಪರ್‌ವೈಸರ್ |
| 7. | ಶ್ರೀಮತಿ ಶೀಲಾ ಹರಿಕೃಷ್ಣ | ಸಾರ್ವಜನಿಕರು |
| 8. | ಶ್ರೀ. ಕಿರಣ್‌ಸಿಂಗ್ | ಸಾರ್ವಜನಿಕರು |
| 9. | ಶ್ರೀ. ಎಸ್.ಸಿ ವಸಂತ್ | ಸಾರ್ವಜನಿಕರು |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಯಾದ ಶ್ರೀ. ತಿಮ್ಮರಸ ಮತ್ತು ಕಾರ್ಯದರ್ಶಿ, ಸಹಾಯಕ ಅಭಿಯಂತರರಾದ ಶ್ರೀ. ರಾಮರಾವ್ ರವರು ಸಭೆಗೆ ಹಾಜರಾಗಿದ್ದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ತಾಪಿಸಲು ಕೋರಲಾಯಿತು.

1. ವಾರ್ಡ್‌ನಲ್ಲಿ ನಡೆಯಬೇಕಿರುವ ಬಿ.ಡಬ್ಲ್ಯೂ.ಎಸ್.ಎಸ್.ಬಿಯ ಕೆಲಸ ಕಾರ್ಯಗಳ ಬಗ್ಗೆ ಚರ್ಚಿಸಲಾಯಿತು.
2. ವಾರ್ಡ್‌ನ ನೊ ಪಾರ್ಕಿಂಗ್ ಸ್ಥಳಗಳಲ್ಲಿ ನಿಲ್ಲಿಸಿರುವ ವಾಹನಗಳನ್ನು ತೆರವುಗೊಳಿಸುವ ವಿಷಯದ ಬಗ್ಗೆ ಚರ್ಚೆ ಮಾಡಿದರು.
3. ವಾರ್ಡ್‌ನಲ್ಲಿ 18 ವರ್ಷದ ಎಲ್ಲಾ ಮಕ್ಕಳಿಗೂ ಕೋವಿಡ್-19 ನ ಲಸಿಕೆ ಹಾಕಿಸಲು ಜಾಗೃತಿ ಮೂಡಿಸುವಂತೆ ಸೂಚಿಸಲಾಯಿತು.
4. ಕೋವಿಡ್-19 ಸಾಂಕ್ರಾಮಿಕ ರೋಗದ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು.
5. 1ನೇ ಮುಖ್ಯರಸ್ತೆ ಗಂಗಾನಗರ ಬಡಾವಣೆ ರಸ್ತೆಯಲ್ಲಿ ಹಾಕಿಕೊಂಡಿರುವ ಚಾಟ್ಸ್ ಸೆಂಟರ್ ಗಳನ್ನು ತೆರವುಗೊಳಿಸುವ ವಿಷಯದ ಬಗ್ಗೆ ಚರ್ಚಿಸಲಾಯಿತು.
6. ಬಿನ್ನಿ ಮಿಲ್ ರಸ್ತೆಯಲ್ಲಿ ನಂಬರ್ ಪ್ಲೇಟ್ ಇಲ್ಲದಿರುವ ಆಟೋಗಳಿಗೆ ಟ್ರಾಫಿಕ್ ಪೋಲೀಸ್‌ನವರು ಕಡಿವಾಣ ಹಾಕುವ ವಿಷಯದ ಬಗ್ಗೆ ಚರ್ಚಿಸಲಾಯಿತು.

7. 5ನೇ ಮುಖ್ಯರಸ್ತೆ, ಪೌರಕಾರ್ಮಿಕರು (ಶ್ರೀ.ವೆಂಕಟೇಶ್) ಸರಿಯಾಗಿ ಕಾರ್ಯನಿರ್ವಹಿಸದಿಲ್ಲದಿರುವ ವಿಷಯದ ಕುರಿತು ಚರ್ಚೆ ಮಾಡಿದರು.
8. 5ನೇ ಮುಖ್ಯರಸ್ತೆ ಮತ್ತು ಎಂ.ಎಲ್.ಎ ಬಡಾವಣೆಗಳಲ್ಲಿ ಜೋತು ಬಿದ್ದಿರುವ ಮರದ ರೆಂಬೆಗಳನ್ನು ಕತ್ತರಿಸುವ ವಿಷಯದ ಕುರಿತು ಚರ್ಚಿಸಲಾಯಿತು

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 34 ಗಂಗೇನಹಳ್ಳಿ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 34 ಗಂಗೇನಹಳ್ಳಿ

ಪ್ರತಿಯನ್ನು:

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರ ಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
4. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ
5. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಿಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ
6. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
7. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ
8. ಕಛೇರಿ ಕಡತಕ್ಕೆ.